**ಓ.ಎಸ್. ನಂಃ 564/2022**

**ಪಿ.ಡಬ್ಲ್ಯೂಃ 1**

**ದಿನಾಂಕ 05.03.2026 ರಂದು ಸಾಕ್ಷಿದಾರರನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿಯ ಪರ ಶ್ರೀಮತಿ ಆರ್.ಹೆಚ್.ಆರ್. ವಕೀಲರಿಂದಃ**

6. ನಾನು 10 ನೇ ತರಗತಿಯವರೆಗೆ ವಿದ್ಯಾಭ್ಯಾಸವನ್ನು ಮಾಡಿದ್ದು, ನನಗೆ ಕನ್ನಡ ಭಾಷೆ ಓದಲು ಮತ್ತು ಬರೆಯಲು ಬರುತ್ತದೆ. ದಾವಾ ಆಸ್ತಿಗೆ ಪ್ರತಿವಾದಿಯರು ಬಂದು ತೊಂದರೆ ಕೊಟ್ಟ ಕಾರಣ ನಾನು ಈ ದಾವೆಯನ್ನು ಹೂಡಿರುತ್ತೇನೆ. ಪ್ರತಿವಾದಿ ಸಂಖ್ಯೆ 1 ಮತ್ತು 8 ರವರು ಸಲ್ಲಿಸಿರುವ ಪ್ರತಿವಾದ ಪತ್ರದಲ್ಲಿ ಹೇಳಿರುವ ವಿಷಯಗಳ ಬಗ್ಗೆ ನನಗೆ ಮಾಹಿತಿ ಇಲ್ಲ.

7. ದಾವಾ ಆಸ್ತಿಯು ನನ್ನ ಹೆಸರಿನಲ್ಲಿದೆ. ದಾವಾ ಆಸ್ತಿಯು ಸರ್ವೇ ನಂಬರ್ 115 ರಲ್ಲಿದೆ. ದಾವಾ ಆಸ್ತಿಯ ಸಂಬಂಧ ಎ.ಡಿ.ಎಲ್.ಆರ್ ರವರ ಕಚೇರಿ ಮತ್ತು ಜಿಲ್ಲಾಧಿಕಾರಿಯವರ ನ್ಯಾಯಾಲಯದಲ್ಲಿ ಪ್ರಕರಣ ನಡೆದಿತ್ತು ಎಂದರೆ ಸರಿ. ಸಾಕ್ಷಿಯು ಮುಂದುವರೆದು ಸಿವಿಲ್ ನ್ಯಾಯಾಲಯದಲ್ಲಿ ಪರಿಹಾರ ಕಂಡುಕೊಳ್ಳುವಂತೆ ಆದೇಶಿಸಿ ಸದರಿ ಪ್ರಕರಣಗಳು ಮುಕ್ತಾಯಗೊಂಡಿರುತ್ತದೆ ಎಂದು ಸಾಕ್ಷಿಯು ಸ್ವತಃ ನುಡಿದಿರುತ್ತಾರೆ.

8. ಎ.ಡಿ.ಎಲ್.ಆರ್ ರವರ ಕಚೇರಿ ಮತ್ತು ಜಿಲ್ಲಾಧಿಕಾರಿಯವರ ನ್ಯಾಯಾಲಯದಲ್ಲಿ ಪ್ರಕರಣವನ್ನು 4 ನೇ ಪ್ರತಿವಾದಿ ಹೂಡಿದ್ದರು ಎಂದರೆ ಸರಿಯಲ್ಲ. ದಾವಾ ಆಸ್ತಿಯ ಕಂದಾಯ ದಾಖಲೆಗಳನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಸರ್ವೇ ನಂಬರ್ 115 ರ ಯಾವ ದಿಕ್ಕಿನಲ್ಲಿ ದಾವಾ ನಿವೇಶನ ಇದೆ ಎಂದು ಸೂಚಿಸಿದ ಪ್ರಶ್ನೆಗೆ ಸಾಕ್ಷಿಯು ಬಹುಶಃ ಸರ್ವೇ ನಂಬರ್ 115 ರ ಪೂರ್ವ ದಿಕ್ಕಿನಲ್ಲಿದೆ ಎಂದು ನುಡಿದಿರುತ್ತಾರೆ.

9. ದಾವಾ ಆಸ್ತಿಯನ್ನು ನನಗೆ ಮಂಜೂರು ಮಾಡಿದ ನಂತರ ಕಂದಾಯ ಅಧಿಕಾರಿಗಳು ದಾವಾ ಆಸ್ತಿಯನ್ನು ನನಗೆ ತೋರಿಸಿ ಗಡಿ ಗುರುತು ಮಾಡಿಸಿಕೊಟ್ಟಿರುತ್ತಾರೆ. ಅದಕ್ಕೆ ಸಂಬಂಧಿಸಿದ ದಾಖಲೆಗಳನ್ನು ನಾನು ನ್ಯಾಯಾಲಯಕ್ಕೆ

ಹಾಜರುಪಡಿಸಿರುತ್ತೇನೆ. ಕಂದಾಯ ಅಧಿಕಾರಿಗಳು ದಾವಾ ಆಸ್ತಿಯನ್ನು ನನಗೆ ತೋರಿಸಿ ಗಡಿ ಗುರುತು ಮಾಡಿಸಿಕೊಟ್ಟಿರುವುದಿಲ್ಲ ಎಂದರೆ ಸರಿಯಲ್ಲ.

10. ನಾನು ಕೋಡಿಯಾಳದಲ್ಲಿ ವಾಸವಿದ್ದೇನೆ. ಪ್ರತಿವಾದಿ ಸಂಖ್ಯೆ 1 ಮತ್ತು 8 ರವರು ಸಹ ಕೋಡಿಯಾಳದಲ್ಲಿ ವಾಸವಿದ್ದಾರೆ ಎಂದರೆ ಸರಿ. ಕೋಡಿಯಾಳ ಗ್ರಾಮದ ಸರ್ವೇ ನಂಬರ್ 150 ರಲ್ಲಿ 8 ನೇ ಪ್ರತಿವಾದಿಗೆ ಸೇರಿದ 1 ಎಕರೆ 20 ಗುಂಟೆ ಜಮೀನು ಇದೆ ಎಂದರೆ ಸಾಕ್ಷಿಯು ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ. ದಾವಾ ಆಸ್ತಿಯು ಸರ್ವೇ ನಂಬರ್ 115 ರಲ್ಲಿ ಅಸ್ತಿತ್ವದಲ್ಲಿದ್ದರು ಸಹ 8 ನೇ ಪ್ರತಿವಾದಿಯ ಸರ್ವೇ ನಂಬರ್ 150 ರ ಜಮೀನಿನಲ್ಲಿ ದಾವಾ ಆಸ್ತಿ ಇದೆ ಎಂದು ನಾವು ಸುಳ್ಳು ಸಾಧನೆ ಮಾಡುತ್ತಿದ್ದೇವೆ ಎಂದರೆ ಸರಿಯಲ್ಲ.

11. ನಾನು ಆಂಗ್ಲ ಭಾಷೆಯಲ್ಲಿ ನನ್ನ ಸಹಿ ಮಾಡುತ್ತೇನೆ ಎಂದರೆ ಸರಿ. ನನಗೆ ದಾವಾ ಆಸ್ತಿ ಮಂಜೂರು ಆಗದಿದ್ದರು ಸಹ ನಾನು 4 ನೇ ಪ್ರತಿವಾದಿಯೊಂದಿಗೆ ಶಾಮಿಲಾಗಿ 1 ಮತ್ತು 8 ನೇ ಪ್ರತಿವಾದಿಯರಿಗೆ ತೊಂದರೆ ಕೊಡುವ ಉದ್ದೇಶದಿಂದ ಈ ಸುಳ್ಳು ದಾವೆಯನ್ನು ಹೂಡಿರುತ್ತೇನೆ ಎಂದರೆ ಸರಿಯಲ್ಲ. ಕೋಡಿಯಾಳ ಗ್ರಾಮದಲ್ಲಿ ನಾನು ವಾಸವಿರುವ ಮನೆಯ ಕಂದಾಯವನ್ನು ನಾನೇ ಕಟ್ಟುತ್ತಿದ್ದೇನೆ. ನಿಪಿ.2 ಮತ್ತು 3 ರ ದಾಖಲೆಗಳು ದಾವಾ ಆಸ್ತಿಗೆ ಸಂಬಂಧಪಡದ ದಾಖಲೆಗಳು ಎಂದರೆ ಸರಿಯಲ್ಲ. ಕೋಡಿಯಾಳ ಗ್ರಾಮದ ಸರ್ವೇ ನಂಬರ್ 150 ರ 1 ಎಕರೆ 20 ಗುಂಟೆ ಜಮೀನು 8 ನೇ ಪ್ರತಿವಾದಿಗೆ ತಮ್ಮ ಗಂಡನಿಂದ ದಾನದ ರೂಪದಲ್ಲಿ ಬಂದಿದ್ದು, ಇಂದಿಗೂ ಸಹ 8 ನೇ ಪ್ರತಿವಾದಿಯೇ ಸದರಿ ಆಸ್ತಿಯ ಮಾಲೀಕರು ಮತ್ತು ಸ್ವಾಧೀನದಾರರಾಗಿರುತ್ತಾರೆ ಎಂದರೆ ಸರಿಯಲ್ಲ. ಸುಳ್ಳು ದಾಖಲೆಗಳ ಆಧಾರದ ಮೇಲೆ ನಾನು ಈ ಸುಳ್ಳು ದಾವೆಯನ್ನು ಹೂಡಿರುತ್ತೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ ಇದೆ.**

**1 ನೇ ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ**
**ನ್ಯಾಯಾಧೀಶರು, ಕೆ.ಆರ್.ನಗರ.**